ಬಿ.ಪಿ.ಎಲ್. ಕಾರ್ಡ್‌ದಾರರ ಮಾಹಿತಿ

1657(2044); ಶ್ರೀ ನಾರಾಯಣಸ್ವಾಮಿ ಎಸ್.ಎನ್. (ಬಂಗಾರಪೇಟೆ)

ಅ) ಬಂಗಾರಪೇಟೆ ತಾಲ್ಲೂಕಿನಲ್ಲಿ ಹಾಲಿ ಇರುವ ಬಿಪಿಎಲ್ ಕಾರ್ಡ್‌ದಾರರ ಸಂಖ್ಯೆ ಎಷ್ಟು;

ಆ) 2014–15ನೇ ಸಾಲಿನ ಜನವರಿ ಅಂತ್ಯದವರೆಗೆ ಹೊಸದಾಗಿ ಸೇರ್ಪಡೆಗಾಗಿ ಸ್ವೀಕರಿಸಿರುವ ಅರ್ಜಿಗಳೆಷ್ಟು;

ಇ) ಅರ್ಜಿದಾರರಿಗೆ ಪಡಿತರ ಚೀಟಿಯನ್ನು ಯಾವಾಗ ವಿತರಣೆ ಮಾಡಲಾಗುವುದು;

ಶ್ರೀ ದಿನೇಶ್ ಗುಂಡೂರಾವ್ (ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು)

ಅ) ಬಂಗಾರಪೇಟೆ ತಾಲ್ಲೂಕಿನಲ್ಲಿ ಹಾಲಿ ಎಎವೈ ಸೇರಿದಂತೆ ಒಟ್ಟು 83937 ಬಿಪಿಎಲ್ ಪಡಿತರ ಚೀಟಿಗಳು ಇರುತ್ತವೆ.

ಆ) 2014–15ನೇ ಸಾಲಿನ ಜನವರಿ ಅಂತ್ಯದವರೆಗೆ ಬಂಗಾರಪೇಟೆ ತಾಲ್ಲೂಕಿನಲ್ಲಿ ಹೊಸದಾಗಿ ಪಡಿತರ ಚೀಟಿ ಕೋರಿ 19,326 ಅರ್ಜಿಗಳು ಸ್ವೀಕೃತಿಯಾಗಿರುತ್ತದೆ.

ಇ) ಪಡಿತರ ಚೀಟಿ ವಿತರಣೆಗೆ ಕಾಲಮಿತಿ ನಿಗದಿಪಡಿಸಿರುವುದಿಲ್ಲ. ಅರ್ಜಿಗಳನ್ನು ನ್ಯಾಯಬೆಲೆ ಅಂಗಡಿ ಮಟ್ಟದ ಅಧಿಕಾರಿಗಳು ಪರಿಶೀಲಿಸಿ ಸ್ಥಳ ತನಿಖೆ ನಡೆಸಿ ವರದಿ ನೀಡಿದ ನಂತರ ಮತದಾರರ ಗುರುತಿನ ಚೀಟಿ ಹೊಂದಾಣಿಕೆಯಾಗುವಂತಹ ಅರ್ಜಿಗಳಿಗೆ ಹೊಸ ಪಡಿತರ ಚೀಟಿಯನ್ನು ವಿತರಣೆ ಮಾಡಲಾಗುತ್ತಿದೆ.

ಬಂಗಾರಪೇಟೆ ತಾಲ್ಲೂಕಿನಲ್ಲಿ ಹೊಸದಾಗಿ ಪಡಿತರ ಚೀಟಿ ಕೋರಿ 19,326 ಅರ್ಜಿಗಳು ಸ್ವೀಕೃತಿಯಾಗಿದ್ದು, ಇದರಲ್ಲಿ ಇದುವರೆಗೆ 9,073 ಪಡಿತರ ಚೀಟಿಗಳನ್ನು ವಿತರಿಸಿದ್ದು, 870 ಪಡಿತರ ಚೀಟಗಳು ವಿತರಣೆಗೆ ಸಿದ್ದಗೊಂಡಿರುತ್ತದೆ. 365 ಅರ್ಜಿಗಳು ತಿರಸ್ಕೃತಗೊಂಡಿದ್ದು, ಉಳಿದ 9,018 ಅರ್ಜಿಗಳಲ್ಲಿ 3644 ಅರ್ಜಿಗಳಿಗೆ ಮಾತ್ರ ಎಪಿಕ್ ಸಂಖ್ಯೆ ಸ್ವೀಕೃತಗೊಂಡಿದ್ದು, ಇವು ಪರಿಶೀಲನೆಯ ವಿವಿಧ ಹಂತದಲ್ಲಿ ಇರುತ್ತದೆ.

ಪ್ರಾಥಮಿಕ ಆರೋಗ್ಯ ಕೇಂದ್ರಗಳು

1660(2047); ಶ್ರೀ ನಾರಾಯಣಸ್ವಾಮಿ ಎಸ್.ಎನ್. (ಬಂಗಾರಪೇಟೆ)

ಅ) ಬಂಗಾರಪೇಟೆ ಕ್ಷೇತ್ರ ವ್ಯಾಪ್ತಿಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು;

ಆ) ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳಾದ ಕಟ್ಟಡ, ಸಿಬ್ಬಂದಿ ಮತ್ತು ಇತರ ಔಷಧಿ ಸೌಲಭ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದರೆ, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುತ್ತದೆ?

ಶ್ರೀ ಯು.ಟಿ. ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂಗಾರಪೇಟೆ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು ಐದು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.